ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಡಿಟಿಇ/ಯು.ರೆ.ಕ್ರಾಸ್/1/2025/15

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ,
ಬೆಂಗಳೂರು-560001, ದಿನಾಂಕ:04.03.2025

**-: ಸುತ್ತೋಲೆ :-**

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೆ ಒಳಪಡುವ ಎಲ್ಲಾ ಸರ್ಕಾರಿ/ ಸರ್ಕಾರಿ ಅನುದಾನಿತ/ ಖಾಸಗಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಕಾಲೇಜುಗಳು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸದಸ್ಯತ್ವ ಪಡೆದು ಯುವ ರೆಡ್ ಕ್ರಾಸ್ ಘಟಕ ಪ್ರಾರಂಭಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರಿ ಆದೇಶ ಸಂಖ್ಯೆ:ಇಡಿ 64 ವಿವಿಧ 2011, ದಿನಾಂಕ: 22/12/20211.
2. ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ ಶೈವಿ 03 ಸುತ್ತೋಲೆ 2024-25, ದಿನಾಂಕ:11/06/2024
3. ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆಯ ಪತ್ರ ಸಂಖ್ಯೆ: ಐ.ಆರ್.ಸಿ.ಎಸ್/ವೈ.ಆರ್.ಸಿ/ಎಲ್.ಸಿ1683 & 1684/2024-25, ದಿನಾಂಕ:04/11/2024

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರಗಳನ್ವಯ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೆ ಒಳಪಡುವ ಎಲ್ಲಾ ಸರ್ಕಾರಿ/ ಸರ್ಕಾರಿ ಅನುದಾನಿತ/ ಖಾಸಗಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಪ್ರಾಂಶುಪಾಲರು ತಮ್ಮ ಸಂಸ್ಥೆಯಲ್ಲಿ ಯುವ ರೆಡ್ ಕ್ರಾಸ್ ಘಟಕ ಪ್ರಾರಂಭಿಸಲು ಅಗತ್ಯ ಕ್ರಮ ವಹಿಸಲು ಹಾಗೂ ಘಟಕದ ನೋಂದಣಿ ಶುಲ್ಕವಾಗಿ ಒಂದು ಬಾರಿ ರೂ.1,500/-ಗಳನ್ನು ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇಲ್ಲಿಗೆ ಪಾವತಿಸಲು ಹಾಗೂ ಕಾಲೇಜಿನಲ್ಲಿ ಪ್ರವೇಶಾತಿ ಶುಲ್ಕ ಪಡೆಯುವಾಗ ಪ್ರತಿಯೊಬ್ಬ ವಿದ್ಯಾರ್ಥಿಯಿಂದ ಪ್ರತಿ ವರ್ಷ ರೂ.50/-ರಂತೆ ರೆಡ್ ಕ್ರಾಸ್ ಶುಲ್ಕವನ್ನು ಪಡೆಯಲು ಹಾಗೂ ಸಂಗ್ರಹಿಸಲುಆದ ಶುಲ್ಕದಲ್ಲಿ ಶೇಕಡ 70% ರಷ್ಟನ್ನು (ರೂ.35/-) ಉಲ್ಲೇಖ(3)ರ ಸರ್ಕಾರದ ಮಾರ್ಗಸೂಚಿಯಂತೆ ರೆಡ್ ಕ್ರಾಸ್ ಘಟಕದಲ್ಲಿ ಉಳಿಸಿಕೊಂಡು ಅದರ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಹಾಗೂ ಉಳಿದ ಶೇಕಡ 30%ರಷ್ಟನ್ನು (ರೂ.15/- ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ಬೆಂಗಳೂರು ಇಲ್ಲಿಗೆ ಕಳುಹಿಸಿಕೊಡಲು ಆದೇಶಿಸಲಾಗಿರುತ್ತದೆ.(ಸದರಿ ಆದೇಶದ ಪ್ರತಿಗಳು www.karnatakaredcross.org ಯೂತ್ ರೆಡ್ ಕ್ರಾಸ್ ಶಪಿಕೆಯಲ್ಲಿ ಲಭ್ಯವಿರುತ್ತದೆ)

ಮುಂದುವರೆದು, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೆ ಒಳಪಡುವ ಕೆಲವು ಕಾಲೇಜುಗಳು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸದಸ್ಯತ್ವ ಪಡೆದಿರುವುದಿಲ್ಲ. ಅಂತಹ ಕಾಲೇಜುಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿರುತ್ತಾರೆ.

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯು ವಿದ್ಯಾರ್ಥಿಗಳಿಗೆ ಮಾನವೀಯ ಮೌಲ್ಯಗಳು, ಸೇವಾಮನೋಭಾವ, ಶಿಸ್ತು, ಸಂಯಮ, ದೇಶಪ್ರೇಮ ಮತ್ತು ಮುಂದಾಳತ್ವದಂತಹ ಗುಣಗಳನ್ನು ಅಭಿವೃದ್ಧಿಪಡಿಸಿ, ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಲು ಹಾಗೂ ಪ್ರಥಮ ಚಿಕಿತ್ಸೆ, ಸಾಂಕ್ರಾಮಿಕ ರೋಗಗಳ ಮುಂಜಾಗ್ರತ ಕ್ರಮಗಳ, ಪ್ರಕೃತಿ ವಿಕೋಪದ ಸಮಯದಲ್ಲಿನ ಪರಿಹಾರೋಪಾಯಗಳಂತಹ ಮಾರ್ಗೋಪಾಯದ ತರಬೇತಿ ನೀಡುವ ಮಹತ್ತರ ಕಾರ್ಯ ನಿರ್ವಹಿಸುತ್ತಿರುವುದರಿಂದ ವಿದ್ಯಾರ್ಥಿಗಳ ಸರ್ವಾಂಗೀಣ ವಿಕಾಸನಕ್ಕೆ ಉಪಯೋಗವಾಗಿರುತ್ತದೆ.

ಆದ್ದರಿಂದ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೆ ಒಳಪಡುವ ಎಲ್ಲಾ ಸರ್ಕಾರಿ/ ಸರ್ಕಾರಿ ಅನುದಾನಿತ/ ಖಾಸಗಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಕಾಲೇಜುಗಳು ಕಡ್ಡಾಯವಾಗಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆಯ ಸದಸ್ಯತ್ವ ಪಡೆಯಲು ಹಾಗೂ ಕಾಲೇಜುಗಳಲ್ಲಿ ಯುವ ರೆಡ್ ಕ್ರಾಸ್ ಘಟಕ ಪ್ರಾರಂಭಿಸಿ, ಅದರ ಕಾರ್ಯಚಟುವಟಿಕೆಗಳನ್ನು ನಡೆಸಲು ಈ ಮೂಲಕ ಸೂಚಿಸಲಾಗಿದೆ.

"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"

ನಿರ್ದೇಶಕರು
ತಾಂತ್ರಿಕಶಿಕ್ಷಣ ಇಲಾಖೆ
ಬೆಂಗಳೂರು-01.

ಇವರಿಗೆ: ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

1. ರಾಜ್ಯದ ಎಲ್ಲಾ ಸರ್ಕಾರಿ/ಸರ್ಕಾರಿ ಅನುದಾನಿತ/ ಖಾಸಗಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಆಯುಕ್ತರ ಆಪ್ತಶಾಖೆಗೆ.
3. ನಿರ್ದೇಶಕರ ಆಪ್ತಶಾಖೆಗೆ.
4. ಜಂಟಿ ನಿರ್ದೇಶಕರು-ಆಡಳಿತ/ ಸಿಡಿಸಿ/ ಪರೀಕ್ಷೆ/ ಡಿವಿಪಿ ವಿಭಾಗಗಳಿಗೆ.
3. ಪ್ರಧಾನ ಕಾರ್ಯದರ್ಶಿಗಳು, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ ರಾಜ್ಯ ಶಾಖೆ, ನಂ.26, ರೇಸ್ ಕೋರ್ಸ್ ರಸ್ತೆ, ಮದಲನ ಮಹಡಿ, ರೆಡ್ ಕ್ರಾಸ್ ಭವನ, ಬೆಂಗಳೂರು-01.
4. ಯೂತ್ ರೆಡ್ ಕ್ರಾಸ್ ನೋಡಲ್ ಅಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. E-Governance ವಿಭಾಗಕ್ಕೆ, DTE ವೆಬ್ ಸೈಟ್ ನಲ್ಲಿ ಪ್ರಚುರಪಡಿಸಲು.
6. ಕಛೇರಿ ಕಡತಕ್ಕೆ.